# All India Radio: Bangalore
# Regional Bulletin In Kannada
# 19.07.2025 / 2.30 p.m.

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಹೈಕೋರ್ಟ್ ಮುಖ್ಯ ನ್ಯಾಯಾಧೀಶರಾಗಿ ವಿಭು ಬಕ್ರು ಪ್ರಮಾಣ ವಚನ - ರಾಜ್ಯಪಾಲರಿಂದ ಪ್ರತಿಜ್ಞಾವಿಧಿ ಬೋಧನೆ
2. ಮೈಸೂರಿನಲ್ಲಿ ೨ ಸಾವಿರದ ೫೭೯ ಕೋಟಿ ರೂಪಾಯಿ ವೆಚ್ಚದ ವಿವಿಧ ಕಾಮಗಾರಿ ಹಾಗೂ ಅಭಿವೃದ್ಧಿ ಯೋಜನೆಗಳಿಗೆ ಸರ್ಕಾರ ಚಾಲನೆ
3. ಕನ್ನಡ ಧ್ವಜಕ್ಕೆ ಅಧಿಕೃತ ಮಾನ್ಯತೆ ಕೋರಿ ಕೇಂದ್ರ ಸರ್ಕಾರಕ್ಕೆ ಸಚಿವ ಶಿವರಾಜ್ ತಂಗಡಗಿ ಪತ್ರ
4. ಶಾಸಕ ಬೈರತಿ ಬಸವರಾಜು ವಿರುದ್ಧದ ಪ್ರಕರಣದಲ್ಲಿ ಯಾವುದೇ ರಾಜಕೀಯ ದುರುದ್ದೇಶ ಇಲ್ಲ ; ಗೃಹ ಸಚಿವ ಪರಮೇಶ್ವರ್ ಸ್ಪಷ್ಟನೆ

<><><><>

ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಯಾಗಿ ನ್ಯಾಯಮೂರ್ತಿ ವಿಭು ಭಕ್ರು ರಾಜಭವನದಲ್ಲಿ ಇಂದು ನಡೆದ ಸಮಾರಂಭದಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪ್ರಮಾಣವಚನ ಬೋಧಿಸಿದರು. ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉಪಸ್ಥಿತರಿದ್ದರು.

<><><><>

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ರಾಜ್ಯ ಸರ್ಕಾರದ ಸಾಧನಾ ಸಮಾವೇಶ ನಡೆಯುತ್ತಿದೆ. ಸಮಾವೇಶದಲ್ಲಿ ೨ ಸಾವಿರದ ೫೭೯ ಕೋಟಿ ರೂಪಾಯಿ ಅನುದಾನಗಳ ವಿವಿಧ ಕಾಮಗಾರಿ ಹಾಗೂ ಅಭಿವೃದ್ಧಿ ಯೋಜನೆಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದ್ದಾರೆ. ಕಾರ್ಯಕ್ರಮದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವ ಸಂಪುಟದ ಸಹದ್ಯೋಗಿಗಳು ಭಾಗಿಯಾಗಿದ್ದಾರೆ.

<><><><>

ಕನ್ನಡ ಧ್ವಜಕ್ಕೆ ಅಧಿಕೃತ ಮಾನ್ಯತೆ ಕೋರಿ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ಎಸ್. ತಂಗಡಗಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದ್ದಾರೆ. ಈ ಕುರಿತಂತೆ ಕೇಂದ್ರ ಸಂಸ್ಕೃತಿ ಸಚಿವ

ಗಜೇಂದ್ರ ಸಿಂಗ್ ಶೇಖಾವತ್ ಭೇಟಿ ಮಾಡಲು ನಿರ್ಧರಿಸಿದ್ದಾರೆ. ಪ್ರಸ್ತುತ ಕರ್ನಾಟಕ ಧ್ವಜವು ಅಧಿಕೃತವಲ್ಲ. ಇದಕ್ಕೆ ಅಧಿಕೃತ ಸ್ಥಾನಮಾನ ನೀಡುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ ಮತ್ತು ಶೋಭಾ ಕರಂದ್ಲಾಜೆ ಕನ್ನಡ ಧ್ವಜಕ್ಕೆ ಅಧಿಕೃತ ಮಾನ್ಯತೆ ದೊರಕಿಸಿಕೊಡುವಲ್ಲಿ ಪ್ರಯತ್ನಿಸುವಂತೆ ಮನವಿ ಮಾಡಿದ್ದಾರೆ.

<><><><>

ರೌಡಿ ಶೀಟರ್ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಶಾಸಕ, ಮಾಜಿ ಸಚಿವ ಬೈರತಿ ಬಸವರಾಜ ವಿರುದ್ಧ ಪೊಲೀಸರು ಕೈಗೊಂಡಿರುವ ಕ್ರಮದ ಹಿಂದೆ ಯಾವುದೇ ರಾಜಕೀಯ ದುರುದ್ದೇಶ ಇಲ್ಲ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ನಾಯಕರ ಆರೋಪವನ್ನು ತಳ್ಳಿ ಹಾಕಿದ್ದಾರೆ. ಮೃತರ ತಾಯಿ ಎಫ್ಐಆರ್‌ನಲ್ಲಿ ಬೈರತಿ ಬಸವರಾಜ ಹೆಸರನ್ನು ಉಲ್ಲೇಖಿಸದಿದ್ದರೆ ಈ ವಿಷಯ ಹೊರ ಬರುತ್ತಿರಲಿಲ್ಲ ಎಂದು ಹೇಳಿದ್ದಾರೆ. ಇಂದು ಬೈರತಿ ಬಸವರಾಜು ಪೊಲೀಸರ ಮುಂದೆ ವಿಚಾರಣೆಗೆ ಹಾಜರಾಗಲಿದ್ದಾರೆ.

<><><><>

ವಿಜಯಪುರ ಜಿಲ್ಲೆಯ ತಿಕೋಟಾ ತಾಲೂಕಿನ ಬಾಬಾನಗರ ಬಳಿ ಸುಮಾರು ೪೦೦ ಎಕರೆ ಪ್ರದೇಶದಲ್ಲಿ ೫೫೭ ಕೋಟಿ ರೂಪಾಯಿ ವೆಚ್ಚದಲ್ಲಿ ೦.೭೭ ಟಿಎಂಸಿ ಸಾಮರ್ಥ್ಯದ ಜಲಾಶಯ ನಿರ್ಮಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ತಿಕೋಟಾ ಪಟ್ಟಣದಲ್ಲಿ ಸಿದ್ದಾಪುರ - ತಿಕೋಟಾ ಕೂಡು ರಸ್ತೆಯ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಬಾಬಾನಗರ ಬಳಿ ಜಲಾಶಯ ನಿರ್ಮಾಣದಿಂದ ಭಾಗದ ರೈತರಿಗೆ ಬೇಸಿಗೆಯಲ್ಲಿ ಎದುರಾಗುವ ನೀರಿನ ಸಮಸ್ಯೆಗೆ ಪರಿಹಾರ ಸಿಗಲಿದೆ. ಕಾಲುವೆಗಳ ಮೂಲಕ ೧೫೬ ಹಳ್ಳಗಳಲ್ಲಿ ಅಲ್ಲಲ್ಲಿ ಚೆಕ್ ಡ್ಯಾಂ ನಿರ್ಮಿಸಲು ನಿರ್ಧರಿಸಿದ್ದು, ಇದರಿಂದ ಅಂತರ್ಜಲ ವೃದ್ಧಿಸಲಿದೆ ಎಂದು ಹೇಳಿದ್ದಾರೆ.

<><><><>

ಪ್ರಸಕ್ತ ಸಾಲಿನ ಸ್ವಚ್ಛ ಸರ್ವೇಕ್ಷಣ ಅಭಿಯಾನದಲ್ಲಿ ಚಿಕ್ಕಬಳ್ಳಾಪುರ ನಗರಸಭೆ ಜಿಲ್ಲೆಯ ೬ ನಗರ ಸ್ಥಳೀಯ ಸಂಸ್ಥೆಗಳ ಪೈಕಿ ಮೊದಲ ಸ್ಥಾನದಲ್ಲಿದ್ದು, ಗುಡಿಬಂಡೆ ಕೊನೆಯ ಸ್ಥಾನದಲ್ಲಿದೆ. ಚಿಕ್ಕಬಳ್ಳಾಪುರ ನಗರಸಭೆ ಸ್ವಚ್ಛ ಸರ್ವೇಕ್ಷಣ್ ರಾಷ್ಟ್ರ ಮಟ್ಟದ ಅಭಿಯಾನದಲ್ಲಿ ೬೯೦ನೇ ಸ್ಥಾನದಲ್ಲಿದ್ದು, ರಾಜ್ಯ ಮಟ್ಟದ ಪಟ್ಟಿಯಲ್ಲಿ ೧೧೫ನೇ ಸ್ಥಾನದಲ್ಲಿದೆ. ಚಿಕ್ಕಬಳ್ಳಾಪುರ ನಗರಸಭೆಯ ಮತ್ತೊಂದು ವಿಶೇಷವೆಂದರೆ ನಗರದಲ್ಲಿ ಪ್ರತಿನಿತ್ಯ ಉತ್ಪಾದನೆಯಾಗುವ ಕಸವನ್ನು ಮೂಲದಲ್ಲೇ ಹಸಿ ಮತ್ತು ಒಣ ಕಸವನ್ನಾಗಿ ಬೇರ್ಪಡಿಸಿ ಅದನ್ನು ರೈತರ ಜಮೀನಿನಲ್ಲೇ ಸಾವಯವ ಗೊಬ್ಬರವನ್ನಾಗಿ ಪರಿವರ್ತಿಸಿ ರೈತರಿಗೆ ಉಚಿತವಾಗಿ ನೀಡಲಾಗುತ್ತಿದೆ.

<><><><>

ರಾಜ್ಯದ ವಿವಿಧೆಡೆ ಮಳೆಯಾಗುತ್ತಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವ್ಯಾಪಕ ಮಳೆಯಾಗುತ್ತಿದ್ದು, ಭಾರೀ ಮಳೆಯ ಕಾರಣ ಮುಂಜಾಗ್ರತಾ ಕ್ರಮವಾಗಿ ಜಿಲ್ಲೆಯ ಕೆಲವು ತಾಲೂಕುಗಳಿಗೆ ಜಿಲ್ಲಾಡಳಿತ ರಜೆ ಘೋಷಿಸಿದೆ. ಮಂಗಳೂರು ತಾಲೂಕು ವ್ಯಾಪ್ತಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಉಳ್ಳಾಲ ನೇತ್ರಾವತಿ ಸೇತುವೆಯಿಂದ ಸುರತ್ಕಲ್, ಮುಕ್ಕ, ನಂದಿನಿ ನದಿ ಸೇತುವೆಯವರೆಗೆ ಹಾಗೂ ಪೂರ್ವದಲ್ಲಿ ವಳಚ್ಚಿಲ್, ಅಡ್ಡೂರು ಸೇತುವೆ, ಎಡಪದವು, ಬಜಪೆ ಎಕ್ಕಾರುವರೆಗಿನ ಶಾಲೆಗಳಿಗೆ ರಜೆ ಘೋಷಿಸಲಾಗಿದೆ. ಉಳ್ಳಾಲ ಮತ್ತು ಬಂಟ್ವಾಳ ತಾಲೂಕಿನ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ, ಹಾಗೂ ಶಾಲಾ-ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಕಡಲು ಕೂಡ ಪ್ರಕ್ಷುಬ್ಧ ಗೊಂಡಿದ್ದು, ಉಳ್ಳಾಲ ಸಮುದ್ರದ ಭೋರ್ಗರೆತ ಹೆಚ್ಚಾಗಿದೆ. ಉತ್ತರಕನ್ನಡ ಜಿಲ್ಲೆಯ ಕರಾವಳಿ ತಾಲೂಕುಗಳಾದ ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ ಹಾಗೂ ಭಟ್ಕಳಗಳಲ್ಲಿ ನಿರಂತರ ಮಳೆ ಸುರಿಯುತ್ತಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ. ಭಟ್ಕಳದಲ್ಲಿ ಅತೀ ಹೆಚ್ಚು ೧೧೯ ಮಿಲಿ ಮೀಟರ್ ಮಳೆ ಸುರಿದಿದೆ ಹವಾಮಾನ ಇಲಾಖೆ ನಾಳೆಯವರೆಗೆ ಆರೆಂಜ್ ಅಲರ್ಟ್ ಘೋಷಣೆ ಮಾಡಿದ್ದು, ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸುವಂತೆ ಜಿಲ್ಲಾಡಳಿತ ಮನವಿ ಮಾಡಿದೆ.

<><><><>

ಮಂಡ್ಯ ಜಿಲ್ಲೆಯನ್ನು ಬಾಲ್ಯ ವಿವಾಹ ಮುಕ್ತವಾಗಿಸಲು ವಿವಿಧ ಇಲಾಖೆಗಳು ಹಾಗೂ ಅಧಿಕಾರಿಗಳೊಂದಿಗೆ ಸಾರ್ವಜನಿಕರು ಕೈ ಜೋಡಿಸಬೇಕು ಎಂದು ಮಂಡ್ಯ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಸುಬ್ರಮಣ್ಯ ಜಿ.ಎನ್ ಕರೆ ನೀಡಿದ್ದಾರೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಕ್ಕಳ ರಕ್ಷಣಾ ನಿರ್ದೇಶನಾಲಯ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಬೃಹತ್ ಜಾಥಾ ಹಾಗೂ ವಾಕಥಾನ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮೊದಲು ಹೆಣ್ಣು ಮಕ್ಕಳು ಬಾಲ್ಯ ವಿವಾಹದ ದುಷ್ಪರಿಣಾಮಗಳು, ಕಾನೂನುಗಳ ಬಗ್ಗೆ ತಿಳಿದುಕೊಂಡು ಬಾಲ್ಯ ವಿವಾಹ ವಿರೋಧಿಸುವ ಪ್ರವೃತ್ತಿ ಬೆಳಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

**ಧ್ವನಿ : ಸುಬ್ರಮಣ್ಯ ಜಿ.ಎನ್**

ಬಾಲ್ಯ ವಿವಾಹದ ಪ್ರಕರಣ ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ-೧೦೯೮ ಅಥವಾ ೧೧೨ ಗೆ ಕರೆ ಮಾಡಿದರೆ ತಕ್ಷಣ ಅಧಿಕಾರಿಗಳು ಬಾಲ್ಯ ವಿವಾಹ ನಿಲ್ಲಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲಿದ್ದಾರೆ ಎಂದು ತಿಳಿಸಿದ್ದಾರೆ.

<><><><>

ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನ ದೇವನಗೂಲ್ ಗ್ರಾಮದ ಬಳಿ ಇಂದು ಖಾಸಗಿ ಪ್ರವಾಸಿ ಬಸ್ ಪಲ್ಟಿಯಾದ ಪರಿಣಾಮ ಬಸ್ಸಿನಲ್ಲಿ ಪ್ರಯಾಣಿಸುತ್ತಿದ್ದ ೨೫ ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡಿದ್ದಾರೆ. ಇಬ್ಬರ ಸ್ಥಿತಿ ಗಂಭೀರವಾಗಿದ್ದು, ಗಾಯಗೊಂಡವರನ್ನು ಮೂಡಿಗೆರೆ ಹಾಗೂ ಚಿಕ್ಕಮಗಳೂರಿನ ವಿವಿಧ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತಿದೆ. ದೇವನಗೂಲ್ ಗ್ರಾಮದ ರಸ್ತೆ ತಿರುವಿನಲ್ಲಿ ದಟ್ಟ ಮಂಜು ಆವರಿಸಿದ ಕಾರಣ ಚಾಲಕನಿಗೆ ಸರಿಯಾಗಿ ರಸ್ತೆ ಕಾಣದೆ ಅಪಘಾತ ಸಂಭವಿಸಿದೆ. ಬೆಂಗಳೂರಿನ ಖಾಸಗಿ ಕಂಪನಿಯೊಂದರ ಉದ್ಯೋಗಿಗಳು ಕುದುರೆಮುಖ ಪ್ರವಾಸಿ ತಾಣಕ್ಕೆ ತೆರಳುತಿದ್ದ ವೇಳೆ ಈ ಅವಘಡ ಸಂಭವಿಸಿದೆ.

<><><><>

ಸಂಚಾರ ಸುರಕ್ಷತಾ ಅಭಿಯಾನದ ಅಂಗವಾಗಿ ಚಿಕ್ಕಬಳ್ಳಾಪುರ ಸಂಚಾರ ಪೊಲೀಸ್ ಠಾಣೆಯ ಪೊಲೀಸರು ಕಾರ್ಯಾಚರಣೆ ನಡೆಸಿ ಅಪ್ರಾಪ್ತ ವಯಸ್ಸಿನವರು ಚಲಾಯಿಸುತ್ತಿದ್ದ ೧೯ ದ್ವಿಚಕ್ರ ವಾಹನಗಳನ್ನು ಜಪ್ತಿ ಮಾಡಿದ್ದಾರೆ. ಮೋಟಾರು ವಾಹನ ತಿದ್ದುಪಡಿ ಕಾಯಿದೆಯಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ತಿಳಿಸಿದ್ದಾರೆ. ಅಪ್ರಾಪ್ತರಿಗೆ ವಾಹನ ನೀಡಿದ ಪೋಷಕರು ಅಥವಾ ಮಾಲೀಕರಿಗೆ ೨೫ ಸಾವಿರ ರೂಪಾಯಿ ದಂಡ ಹಾಗೂ ೦೩ ವರ್ಷದವರೆಗೆ ಕಾರಾಗೃಹ ಶಿಕ್ಷೆ ವಿಧಿಸಬಹುದಾಗಿದೆ. ಸಂಬಂಧಪಟ್ಟ ವಾಹನದ ನೋಂದಣಿಯನ್ನು ೧೨ ತಿಂಗಳವರೆಗೆ ರದ್ದುಗೊಳಿಸಲು ಅವಕಾಶವಿದೆ. ಈ ನಿಟ್ಟಿನಲ್ಲಿ ಶಿಕ್ಷಣ ಸಂಸ್ಥೆಗಳ ಸಹಕಾರವನ್ನೂ ಕೋರಲಾಗಿದೆ ಎಂದು ಕುಶಲ್ ಚೌಕ್ಸೆ ಸ್ಪಷ್ಟಪಡಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>